# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **113 (12)**
ಸದಸ್ಯರ ಹೆಸರು : ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 09.12.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ4(1)ಸ.ಪ್ರೌ.ಶಾ.ಶಿನೇ/46/2021-22/ಇ-1407683, ದಿನಾಂಕ:22/05/2024ರ ಕಡತವನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್2024 ದಿನಾಂಕ:07.10.2024 ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರೌಢ ಶಾಲಾ ಸಹ ಶಿಕ್ಷಕರ ಒಟ್ಟು ಹುದ್ದೆಗಳಲ್ಲಿ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.<br><br>ಆದರೆ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೆನಿ 2024 ದಿನಾಂಕ:25.11.2024 ರನ್ವಯ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. |

| | | |
|---|---|---|
| | | ಪ್ರಸ್ತುತ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತ ದೃಷ್ಟಿಯಿಂದ ಖಾಯಂ ಹುದ್ದೆ ಭರ್ತಿ ಆಗುವವರೆಗೂ ಅಥವಾ ಶೈಕ್ಷಣಿಕ ಸಾಲಿನ ಅಂತ್ಯದವರೆಗೂ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲಾಗಿದೆ. |
| (ಆ) | ಸರ್ಕಾರಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ನಿಗಧಿತ ಸಮಯದಲ್ಲಿ ವೇತನ ಪಾವತಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | 2024-25ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ನಿಗದಿತ ಸಮಯಗಳಲ್ಲಿ ವೇತನವನ್ನು ಪಾವತಿ ಮಾಡಲು ಕ್ರಮವಹಿಸಲಾಗಿರುತ್ತದೆ. |
| (ಇ) | ಪ್ರತಿ ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು) | ಅ ಭಾಗದ ಉತ್ತರದಲ್ಲಿ ವಿವರಿಸಲಾಗಿದೆ. |

**ಸಂಖ್ಯೆ: ಇಪಿ 295 ಎಲ್‌ಬಿಪಿ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು